ಸಾಕ್ಷಿಯು ಕ್ರಮವಾಗಿ ಪ್ರಮಾಣೀಕರಿಸಿದ ದಿನಾಂಕಃ 03-04-2023

ಮುಖ್ಯ ವಿಚಾರಣೆಃ ಶ್ರೀ. ಪಿ.ವಿ.ಆರ್ ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರ ಸಲ್ಲಿಸುತ್ತಿದ್ದು ಅದರಲ್ಲಿ ಹೇಳಿರುವ ವಿಚಾರಗಳು ಸತ್ಯವಾಗಿರುತ್ತದೆ. ಆದನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿದ್ದು ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ. ನಾನು ಕೆಲಕೊಡ್ಲಿ ಗ್ರಾಮದ ಸರ್ವೆ ನಂ. 122 ರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ತಹಶೀಲ್ದಾರರಿಗೆ ನೀಡಿದ ದೂರಿನ ಪ್ರತಿಯನ್ನು ನಿಪಿ 2 ಎಂದು, ಕೆಲಕೊಡ್ಲಿ ನ್ಯಾಯ ಸಮಿತಿಗೆ ನೀಡಿರುವ ದೂರಿನ ಪ್ರತಿಯನ್ನು ನಿಪಿ 3 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ 2 ಛಾಯಾ ಚಿತ್ರಗಳನ್ನು ನಿಪಿ 4 ಮತ್ತು 5 ಎಂದು, ಸಿಡಿಯನ್ನು ನಿಪಿ 6 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ನೀಡಲಾಯಿತು.

(ನನ್ನ ಉಕ್ತಲೇಕನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಸಹಿ/-

ಓದಿ ಹೇ ಕೇ ಸರಿ ಇದೆ

ಪ್ರ ದ ನ್ಯಾ ದಂ., ಸೋಮವಾರಪೇಟೆ.